# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಸಿ.ಬಿ.ಗುತ್ತಲ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಧಾರವಾಡ, ಇವರಿಗೆ BAMS ಪದವಿ ಕೋರ್ಸ್‌ನ ಪ್ರವೇಶ ಮಿತಿಯನ್ನು 50 ರಿಂದ 100 ಸೀಟುಗಳಿಗೆ ಹೆಚ್ಚಿಸಲು ಅನುಮತಿ ನೀಡುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಆಕುಕ 98 ಪಿಟಿಡಿ 2004, ದಿನಾಂಕ:20.02.2004
2. ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ಪ್ರಸ್ತಾವನೆ ಸಂಖ್ಯೆ:RGUHS/ACA/AFF/AY-54/2022-23, ದಿನಾಂಕ:29.03.2022.
3. ಸರ್ಕಾರದ ನಿರಾಕ್ಷೇಪಣಾ ಪತ್ರ ಸಂಖ್ಯೆ:45 ಪಿಟಿಡಿ 2021, ದಿನಾಂಕ:18.02.2022.
4. NCISM ಇವರ ಅನುಮತಿ ಪತ್ರ ಸಂಖ್ಯೆ: 4-81/2022-AY, ದಿನಾಂಕ:07.07.2023.
5. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಧಾರವಾಡ ಪೀಠದ ರಿಟ್ ಅರ್ಜಿ ಸಂಖ್ಯೆ:101244/2023 (EDN-RES) ರಲ್ಲಿನ ತೀರ್ಪು ದಿನಾಂಕ:30.06.2023
6. ಆಯುಕ್ತರು, ಆಯುಷ್ ಇಲಾಖೆ ಇವರ ಪತ್ರ ಸಂಖ್ಯೆ: ಆಯುಷ್/19/ವೈಶಿ(2)/2021-22, ದಿನಾಂಕ:08.02.2023.

* * * *

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ.(1)ರಲ್ಲಿ ಶ್ರೀ ಸಿ.ಬಿ.ಗುತ್ತಲ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಧಾರವಾಡ ಸಂಸ್ಥೆಗೆ ಹೊಸದಾಗಿ BAMS ಪದವಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ.(2)ರಲ್ಲಿ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಶ್ರೀ ಸಿ.ಬಿ.ಗುತ್ತಲ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಧಾರವಾಡ ಇವರಿಗೆ 2022-23ನೇ ಶೈಕ್ಷಣಿಕ ಸಾಲಿನಿಂದ BAMS ಪದವಿ ಕೋರ್ಸ್‌ನ ಪ್ರವೇಶ ಮಿತಿಯನ್ನು 50 ರಿಂದ 100 ಸೀಟುಗಳಿಗೆ ಹೆಚ್ಚಿಸಲು ನಮೂನೆ-5 ರಲ್ಲಿ Consent of Affiliation ಅನ್ನು ನೀಡಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ.(3)ರಲ್ಲಿ ಶ್ರೀ ಸಿ.ಬಿ.ಗುತ್ತಲ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಧಾರವಾಡ ಇವರಿಗೆ 2022-23ನೇ ಶೈಕ್ಷಣಿಕ ಸಾಲಿನಿಂದ BAMS ಪದವಿ ಕೋರ್ಸ್‌ನ ಪ್ರವೇಶ ಮಿತಿಯನ್ನು 60 ರಿಂದ 100 ಸೀಟುಗಳಿಗೆ ಹೆಚ್ಚಿಸಲು ಅನುಮತಿ ನೀಡಿ ನಮೂನೆ-4 ಅನ್ನು ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ.(4)ರಲ್ಲಿ NCISM ಸಂಸ್ಥೆಯು 2022-23ನೇ ಶೈಕ್ಷಣಿಕ ಸಾಲಿನಿಂದ ಶ್ರೀ ಸಿ.ಬಿ.ಗುತ್ತಲ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಧಾರವಾಡ ಇವರಿಗೆ 2022-23ನೇ ಶೈಕ್ಷಣಿಕ ಸಾಲಿನಿಂದ BAMS ಪದವಿ ಕೋರ್ಸ್‌ನ ಪ್ರವೇಶ ಮಿತಿಯನ್ನು 50 ರಿಂದ 100 ಸೀಟುಗಳಿಗೆ ಹೆಚ್ಚಿಸಲು ಅನುಮತಿ ನೀಡಿರುತ್ತದೆ.

ಮೇಲೆ ಓದಲಾದ ಕ್ರ.ಸಂ.(5)ರ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಧಾರವಾಡ ಪೀಠದ ರಿಟ್ ಅರ್ಜಿ ಸಂಖ್ಯೆ:101244/2023 (EDN-RES) ರಲ್ಲಿ ದಿನಾಂಕ:30.06.2023 ತೀರ್ಪು ನೀಡಿದ್ದು, ತೀರ್ಪಿನ ಉದ್ಧೃತ ಭಾಗ ಈ ಕೆಳಕಂಡಂತಿದೆ.

SKS



Scanned by CamScanner

**"The Writ Petitions are allowed. The 1st respondent is directed to notify the sanctioned and approved increased Under Graduate (BAMS) seat intake in respect of the petitioner college as per the NCISM New Delhi communication/letter Annexure-D dated 07.02.2023 for admission to the under graduate AYUSH/BAMS Degree course 2022-23.**

ಮೇಲೆ ಓದಲಾದ ಕ್ರ.ಸಂ.(6)ರಲ್ಲಿ ಆಯುಕ್ತರು, ಆಯುಷ್ ಇಲಾಖೆ ಇವರು ಶ್ರೀ ಸಿ.ಬಿ.ಗುತ್ತಲ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಧಾರವಾಡ ಇವರಿಗೆ 2022-23ನೇ ಶೈಕ್ಷಣಿಕ ಸಾಲಿನಿಂದ BAMS ಪದವಿ ಕೋರ್ಸ್‌ನ ಪ್ರವೇಶ ಮಿತಿಯನ್ನು 50 ರಿಂದ 100ಕ್ಕೆ ಹೆಚ್ಚಿಸಿ ಪದವಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡಿ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಧಾರವಾಡ ಪೀಠದ ಆದೇಶ, ಆಯುಕ್ತರು, ಆಯುಷ್ ಇಲಾಖೆ ಇವರ ವರದಿ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಶ್ರೀ ಸಿ.ಬಿ.ಗುತ್ತಲ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಧಾರವಾಡ ಇವರಿಗೆ 2022-23ನೇ ಶೈಕ್ಷಣಿಕ ಸಾಲಿನಿಂದ BAMS ಪದವಿ ಕೋರ್ಸ್‌ನ ಪ್ರವೇಶ ಮಿತಿಯನ್ನು 50 ರಿಂದ 100ಕ್ಕೆ ಹೆಚ್ಚಿಸಲು ಅನುಮತಿ ನೀಡಲು ನಿರ್ಧರಿಸಿದೆ. ಆದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ:ಆಕುಕ 07 ಪಿಐಎಂ 2023,</u>**
**<u>ಬೆಂಗಳೂರು, ದಿನಾಂಕ:01.09.2023</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಶ್ರೀ ಸಿ.ಬಿ.ಗುತ್ತಲ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಗರಗ ರಸ್ತೆ, ಮುಮ್ಮಿಗಟ್ಟಿ, ಧಾರವಾಡ-580011 ಸಂಸ್ಥೆಗೆ 2022-23ನೇ ಶೈಕ್ಷಣಿಕ ಸಾಲಿನಿಂದ BAMS ಪದವಿ ಕೋರ್ಸ್‌ನ ಪ್ರವೇಶ ಮಿತಿಯನ್ನು 50 ರಿಂದ 100ಕ್ಕೆ ಹೆಚ್ಚಿಸಿ ಪದವಿ ಕೋರ್ಸ್ ಪ್ರಾರಂಭಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮತಿ ನೀಡಿದೆ.

**<u>ಮುಂದುವರೆದಂತೆ, ಸದರಿ ಸಂಸ್ಥೆಯು ಈ ಕೆಳಕಂಡ ಷರತ್ತುಗಳನ್ನು ಪಾಲಿಸತಕ್ಕದ್ದು:</u>**

1. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಎಲ್ಲಾ ಮೂಲಭೂತ ಸೌಕರ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
2. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮ/ಆದೇಶಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು ಮತ್ತು ಸರ್ಕಾರಿ ಕೋಟಾ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.
3. NCISM ಸಂಸ್ಥೆಯು ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
4. ರಾಜ್ಯ/ಕೇಂದ್ರ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
5. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
6. ಸರ್ಕಾರ/ಪ್ರಾಧಿಕಾರದ ಪೂರ್ವಾನುಮತಿಯಿಲ್ಲದ ಯಾವುದೇ ಕಾರಣಕ್ಕೂ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.
7. ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಕೋರ್ಸ್‌ನ ಶುಲ್ಕಗಳನ್ನು ಮಾತ್ರ ವಿದ್ಯಾರ್ಥಿಗಳಿಂದ ಪಡೆಯತಕ್ಕದ್ದು ಮತ್ತು ಸಕ್ಷಮ ಪ್ರಾಧಿಕಾರದಿಂದ ಮಂಜೂರಾದ ಸೀಟುಗಳಲ್ಲಿ ಕಾಲಕಾಲಕ್ಕೆ ಸರ್ಕಾರವು ನಿಗದಿಪಡಿಸುವ ಅನುಪಾತದಲ್ಲಿ ಸರ್ಕಾರಕ್ಕೆ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.

3---

Scanned by CamScanner

8. ಸಂಸ್ಥೆಯ ಆರ್ಥಿಕ ಸ್ಥಿತಿಯನ್ನು ಆಯುಕ್ತರು, ಆಯುಷ್ ಇಲಾಖೆ, ಇವರು, ಖಚಿತವಡಿಸಿಕೊಳ್ಳುವುದು.
9. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

SR Gorur 01/9/23

**(ಶೈಲಾ ಆರ್ ಗೊರವರ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ಭಾವೈಪ ಮತ್ತು ಸಮನ್ವಯ)

**ಇವರಿಗೆ:**

1. The ChairPerson, National Commission for Indian System of Medicine, Ministry of Ayush Government of India, No.61- 65, Institutional area, Janakapuri-D Block, New Delhi-110 058.
2. ಆಯುಕ್ತರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು 560009.
3. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಬ್ಲಾಕ್, ಜಯನಗರ, ಬೆಂಗಳೂರು-41.
4. ಪ್ರಾಂಶುಪಾಲರು, ಶ್ರೀ ಸಿ.ಬಿ.ಗುತ್ತಲ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಗರಗ ರಸ್ತೆ, ಮುಮ್ಮಿಗಟ್ಟಿ, ಧಾರವಾಡ-580011
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ. ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕ ವಿಕಾಸ ಸೌಧ, ಬೆಂಗಳೂರು.

Scanned by CamScanner